ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: | | 422 |
| ಮಾನ್ಯ ಸದಸ್ಯರ ಹೆಸರು | | ಶ್ರೀ ಅ. ದೇವೇಗೌಡ |
| ಉತ್ತರಿಸುವ ಸಚಿವರು | | ಉಪ ಮುಖ್ಯಮಂತ್ರಿಗಳು (ಉನ್ನತ ಶಿಕ್ಷಣ) |
| ಉತ್ತರಿಸಬೇಕಾದ ದಿನಾಂಕ | | 09-03-2020 |
| ಪ್ರಶ್ನೆ | | ಉತ್ತರ |
| (ಅ) | ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯಕ್ಕೆ ಸರ್ಕಾರದಿಂದ 100 ಎಕರೆ ಜಮೀನು ಎಂಟು ವರ್ಷ ಹಿಂದೆಯೇ ಮಂಜೂರಾಗಿದ್ದು, ಸಂಸ್ಕೃತ ವಿಶ್ವವಿದ್ಯಾಲಯದ ಕಟ್ಟಡ ನಿರ್ಮಾಣ ಮಾಡುವ ಬಗ್ಗೆ ಇದುವರೆವಿಗೂ ಯಾವುದೇ ಕ್ರಮ ಕೈಗೊಂಡಿರುವುದಿಲ್ಲ; ಇದರಿಂದಾಗಿ ಶೈಕ್ಷಣಿಕ ಚಟುವಟಿಕೆ ಕುಂಠಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿಲ್ಲ.<br>ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದಲ್ಲಿ ಶೈಕ್ಷಣಿಕ ಚಟುವಟಿಕೆಗಳು ಕುಂಠಿತಗೊಂಡಿರುವುದಿಲ್ಲ. |
| (ಆ) | ಬಂದಿದ್ದಲ್ಲಿ, ಈ ನಿಟ್ಟಿನಲ್ಲಿ ಸಂಸ್ಕೃತ ವಿಶ್ವವಿದ್ಯಾಲಯದ ಕಟ್ಟಡ ನಿರ್ಮಾಣಕ್ಕೆ ಸರ್ಕಾರವು ಶೀಘ್ರವಾಗಿ ಅನುದಾನ ಬಿಡುಗಡೆ ಮಾಡಿ, ಕಟ್ಟಡ ನಿರ್ಮಿಸಲು ಕ್ರಮ ಕೈಗೊಳ್ಳುವುದೇ? | ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯಕ್ಕೆ ರಾಮನಗರ ಜಿಲ್ಲೆಯ, ಮಾಗಡಿ ತಾಲ್ಲೂಕಿನ ತಿಪ್ಪಸಂದ್ರ ಹೋಬಳಿ, ತಿಪ್ಪಸಂದ್ರ ಗ್ರಾಮದ ಸರ್ವೆ ನಂ. 40ರಲ್ಲಿ 252-22 ಎಕರೆ/ಗುಂಟೆ ಜಮೀನಿನ ಪೈಕಿ ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯಕ್ಕೆ 100 ಎಕರೆ ಜಮೀನನ್ನು ಸರ್ಕಾರಿ ಆದೇಶ ಸಂ. ಆರ್‌ಡಿ 112 ಎಲ್‌ಜಿಬಿ 2012, ದಿನಾಂಕ: 30-03-2013ರಲ್ಲಿ ಮಂಜೂರು ಮಾಡಲಾಗಿರುತ್ತದೆ. ಸದರಿ ಜಮೀನಿನಲ್ಲಿ ವಿಶ್ವವಿದ್ಯಾಲಯದ ಕಟ್ಟಡ ನಿರ್ಮಾಣ ಮಾಡಲು ರೂ. 369.00ಕೋಟಿಗಳ ಅನುದಾನವನ್ನು ಕೋರಿ, ಪ್ರಸ್ತುತ ಸಂಸ್ಕೃತ ವಿಶ್ವವಿದ್ಯಾಲಯದಿಂದ ಪ್ರಸ್ತಾವನೆ ಸ್ವೀಕೃತವಾಗಿದ್ದು, ಸರ್ಕಾರದ ಪರಿಶೀಲನೆಯಲ್ಲಿರುತ್ತದೆ. |

ಸಂಖ್ಯೆ: ಇಡಿ 98 ಯುಎನ್‌ಇ 2020

(ಡಾ: ಅಶ್ವಥ್ ನಾರಾಯಣ ಸಿ.ಎನ್.)
ಉಪ ಮುಖ್ಯಮಂತ್ರಿಗಳು
(ಉನ್ನತ ಶಿಕ್ಷಣ, ಐಟಿ & ಬಿಟಿ,
ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ)